# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 509
2. ಸದಸ್ಯರ ಹೆಸರು : ಶ್ರೀ. ರಿಜ್ವಾನ್ ಅರ್ಷದ್
3. ಉತ್ತರಿಸುವ ದಿನಾಂಕ : 13.12.2018
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಪಿ.ಎಸ್.ಸಿ. ಮೂಲಕ 439 ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ನೇಮಕ ಮಾಡಿಕೊಳ್ಳಲು 2017ರ ಡಿಸೆಂಬರ್ ಮಾಹೆಯಲ್ಲಿ ಮುಖ್ಯ ಪರೀಕ್ಷೆ ನಡೆದಿದ್ದು, ಈವರೆಗೂ ಫಲಿತಾಂಶ ಪ್ರಕಟ ಅಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ 428 ಹುದ್ದೆಗಳನ್ನು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997 ರನ್ವಯ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ದಿನಾಂಕ:12.05.2017ರ ಅಧಿಸೂಚನೆಯಲ್ಲಿ ಕರ್ನಾಟಕ ಲೋಕ ಸೇವಾ ಅಯೋಗವು ಅಹ್ವಾನಿಸಿತ್ತು. ಪೂರ್ವಭಾವಿ ಪರೀಕ್ಷೆಯಲ್ಲಿ 1:20ರ ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ 2017ರ ಡಿಸೆಂಬರ್ ಮಾಹೆಯಲ್ಲಿ ಮುಖ್ಯ ಪರೀಕ್ಷೆಯನ್ನು ನಡೆಸಲಾಗಿದೆ.<br><br>ರಿಟ್ ಅರ್ಜಿ ಸಂಖ್ಯೆ:27674/2012 ಹಾಗೂ ಇತರ ಪ್ರಕರಣಗಳಲ್ಲಿ ಉಚ್ಚ ನ್ಯಾಯಾಲಯವು ಗೆಜೆಟೆಡ್ ಪ್ರೊಬೇಷನರ್ಸ್ 1998, 1999 & 2004ನೇ ಸಾಲಿನ ನೇಮಕಾತಿಯ ಮುಖ್ಯ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯು ಸಂವಿಧಾನ ಬಾಹಿರ ಹಾಗೂ ನಿಯಮಾವಳಿಗಳಿಗೆ ವಿರುದ್ಧವಾಗಿ ನಡೆದಿದೆಯೆಂದು ದಿನಾಂಕ: 21.06.2016ರ ತೀರ್ಪಿನಲ್ಲಿ ತಿಳಿಸಿದೆ ಹಾಗೂ ಸದರಿ ತೀರ್ಪನ್ನು ಸರ್ವೋಚ್ಚ ನ್ಯಾಯಾಲಯವು ದಿನಾಂಕ:11.04.2018ರ ತೀರ್ಪಿನಲ್ಲಿ ಎತ್ತಿಹಿಡಿದಿದೆ.<br><br>ಈ ಹಿನ್ನೆಲೆಯಲ್ಲಿ 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ವ್ಯಕ್ತಿತ್ವ ಪರೀಕ್ಷೆಗೆ 1:5ರ ಅನುಪಾತದ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವಾಗ ಸದರಿ ತೀರ್ಪನ್ನು ಪಾಲಿಸಬೇಕೇ ಎಂಬ ಬಗ್ಗೆ ಸ್ಪಷ್ಟೀಕರಣ ನೀಡುವಂತೆ ಆಯೋಗವು ದಿ: 20.10.2018ರ ಪತ್ರದಲ್ಲಿ ಸರ್ಕಾರವನ್ನು ಕೋರಿದೆ. ಈ ಬಗ್ಗೆ ಮಾನ್ಯ ಅಡ್ವೊಕೇಟ್ ಜನರಲ್ ರವರ ಅಭಿಪ್ರಾಯ ಪಡೆದು ಉಚ್ಚ ನ್ಯಾಯಾಲಯದ ದಿ: 21.06.2016ರ ತೀರ್ಪಿನಲ್ಲಿ ತಿಳಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವಂತೆ ದಿ: 03.11.2018ರ ಪತ್ರದಲ್ಲಿ ಆಯೋಗಕ್ಕೆ ತಿಳಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳುವುದೇ; (ಪೂರ್ಣ ವಿವರ ನೀಡುವುದು) | |
| ಇ) | ಈ ನೇಮಕಾತಿಗಳ ವಿಳಂಬಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು) | |

ಮುಂದುವರೆದು, 1998ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿಗೆ ಸಂಬಂಧಿಸಿದಂತೆ ಆಯೋಗವು ಉಚ್ಛ ನ್ಯಾಯಾಲಯದಲ್ಲಿ ಸ್ಪಷ್ಟೀಕರಣ ಕೋರಿ ದಾಖಲಿಸಿರುವ ಅರ್ಜಿಯನ್ನು ಹಿಂಪಡೆದು, ಸರ್ವೋಚ್ಚ ನ್ಯಾಯಾಲಯದಲ್ಲಿ 'ಮರುಪರಿಶೀಲನಾ ಅರ್ಜಿ'ಯನ್ನು ದಾಖಲಿಸುವ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಬಹುದೆಂದು ಮಾನ್ಯ ಅಡ್ವೋಕೇಟ್ ಜನರಲ್ ರವರ ಅಭಿಪ್ರಾಯದಂತೆ ದಿ:2.11.2018ರ ಪತ್ರದಲ್ಲಿ ಆಯೋಗಕ್ಕೆ ತಿಳಿಸಲಾಗಿದೆ.

2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ವ್ಯಕ್ತಿತ್ವ ಪರೀಕ್ಷೆಗೆ 1:5ರ ಅನುಪಾತದ ಅರ್ಹತಾ ಪಟ್ಟಿಯನ್ನು ದಿ: 03.11.2018ರ ಪತ್ರದ ಅನುಸಾರ ಉಚ್ಛ ನ್ಯಾಯಾಲಯದ ದಿ: 21.06.2016ರ ತೀರ್ಪನ್ನು ಪಾಲಿಸಿದ್ದಲ್ಲಿ ಮತ್ತು 1998ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿಗೆ ಸಂಬಂಧಿಸಿದಂತೆ ಉಚ್ಛ ನ್ಯಾಯಾಲಯದಲ್ಲಿ ಸ್ಪಷ್ಟೀಕರಣ ಕೋರಿ ಆಯೋಗವು ಈಗಾಗಲೇ ದಾಖಲಿಸಿರುವ ಅರ್ಜಿಯನ್ನು ಹಿಂಪಡೆದು, ಸರ್ವೋಚ್ಚ ನ್ಯಾಯಾಲಯದಲ್ಲಿ 'ಮರುಪರಿಶೀಲನಾ ಅರ್ಜಿ'ಯನ್ನು ದಿ: 02.11.2018ರ ಪತ್ರದ ಅನುಸಾರ ದಾಖಲಿಸಿದ್ದಲ್ಲಿ ದ್ವಂದ್ವ ನಿಲುವು ತಾಳಿದಂತಾಗಬಹುದೆಂದು ಆಯೋಗವು ಭಾವಿಸಿರುವುದರಿಂದ ಸ್ಪಷ್ಟೀಕರಣ ನೀಡುವಂತೆ ಆಯೋಗವು ದಿ: 17.11.2018ರ ಪತ್ರದಲ್ಲಿ ಸರ್ಕಾರವನ್ನು ಕೋರಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರವು ಪರಿಶೀಲಿಸಿದ್ದು, ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿಯ ಸಂದರ್ಭದಲ್ಲಿ ಅನುಸರಿಸಬೇಕಾದ ಕಾರ್ಯವಿಧಾನದ ಕುರಿತು ಸಂಸದೀಯ ವ್ಯವಹಾರಗಳ ಇಲಾಖೆಯು ಇತ್ತೀಚೆಗೆ The Karnataka Civil Services (Procedure For Selection of Candidates During Recruitment) Bill, 2018 ಅನ್ನು ಸಿದ್ಧಪಡಿಸಿದೆ. ಸದರಿ ಕರಡನ್ನು ದಿ: 07.12.2018ರ ಪತ್ರದೊಂದಿಗೆ ಆಯೋಗಕ್ಕೆ ಕಳುಹಿಸಿ, ಸದರಿ ವಿಧೇಯಕವನ್ನು ಮುಂಬರುವ ಅಧಿವೇಶನದಲ್ಲಿ ಮಂಡಿಸಲು ಪರಿಶೀಲಿಸುತ್ತಿರುವುದರಿಂದ ಈ ಬಗ್ಗೆ ಅಭಿಪ್ರಾಯವನ್ನು ನೀಡುವಂತೆ ಕೋರಲಾಗಿದೆ.

ಸಂಖ್ಯೆ: ಸಿಆಸುಇ 75 ಸೇಲೋಸೇ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ